# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

6 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560003

ಸಂಖ್ಯೆ:10516 KSEEB/DPIE/C1(EXPR)/1/2023-C SEC ದಿನಾಂಕ: 10/01/2023

## ಜ್ಞಾಪನ

ವಿಷಯ:- 2022-23ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸುವ ಕುರಿತು.

ಉಲ್ಲೇಖ:- 1.ಮಾನ್ಯ ಆಯುಕ್ತರು, ಸಾ,ಶಿ,ಇ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ : ಎ8/ಎಸ್ ಎಸ್ಎಲ್ ಸಿ/ಪ್ರ.ಪ.ಸ್ವ/12/2022-23 ದಿನಾಂಕ: 11/07/2022

2. ಈ ಕಚೇರಿಯ ಅಧಿಸೂಚನೆ ಸಂಖ್ಯೆ:ಎ8/ಎಸ್ ಎಸ್ ಎಲ್ ಸಿ ಅಧಿಸೂಚನೆ/ ಮಾರ್ಚ್-2023 /14/2022-23 ದಿನಾಂಕ:17/09/2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಆದೇಶದಂತೆ, 2019-20 ನೇ ಸಾಲಿನ ಪ್ರಶ್ನೆಪತ್ರಿಕೆಯ ಸ್ವರೂಪ ಮತ್ತು ಕಠಿಣತೆಯ ಮಟ್ಟವನ್ನು ಅನುಸರಿಸಿ 2022-23 ನೇ ಸಾಲಿನ ಎಸ್.ಎಸ್ .ಎಲ್.ಸಿ. ಪರೀಕ್ಷೆಯನ್ನು ನಡೆಸಲಾಗುತ್ತದೆ. ಅದರಂತೆ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪ್ರಥಮ ಭಾಷೆ ಕನ್ನಡ, ದ್ವಿತೀಯ ಭಾಷೆ ಇಂಗ್ಲೀಷ್, ತೃತೀಯ ಭಾಷೆ ಹಿಂದಿ, ಕೋರ್ ವಿಷಯಗಳಾದ ಗಣಿತ, ವಿಜ್ಞಾನ ಮತ್ತು ಸಮಾಜವಿಜ್ಞಾನ ವಿಷಯಗಳ ಮಾದರಿ ಪ್ರಶ್ನೆಪತ್ರಿಕೆಗಳನ್ನು ಮಂಡಲಿಯಲ್ಲಿ ಸಿದ್ದಪಡಿಸಲಾಗಿದ್ದು, ಸದರಿ ಮಾದರಿ ಪ್ರಶ್ನೆಪತ್ರಿಕೆಗಳನ್ನು ಮಂಡಲಿಯ ಜಾಲತಾಣ **kseab.karnataka.gov.in** ರಲ್ಲಿ ಪ್ರಕಟಿಸಲಾಗಿದೆ.

ಮಾದರಿ ಪ್ರಶ್ನೆಪತ್ರಿಕೆಗಳು ಹೊಂದಿರುವ ಸ್ವರೂಪ ಮತ್ತು ಕಠಿಣತೆಯ ಮಟ್ಟವನ್ನು ಮುಂಬರುವ 2023 ರ ಮಾರ್ಚ್/ಏಪ್ರಿಲ್ ಎಸ್.ಎಸ್.ಎಲ್.ಸಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳು ಒಳಗೊಂಡಿರುತ್ತವೆ. ಆದ್ದರಿಂದ ಈ ಮಾದರಿ ಪ್ರಶ್ನೆಪತ್ರಿಕೆಗಳ ಉಪಯೋಗ ಪಡೆಯುವಂತೆ ಶಾಲಾ ಮುಖ್ಯ ಶಿಕ್ಷಕರು ಮತ್ತು ಶಿಕ್ಷಕರುಗಳು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಲು ಈ ಮೂಲಕ ತಿಳಿಸಿದೆ.

ಇನ್ನುಳಿದ ಭಾಷಾ ವಿಷಯಗಳ ಮಾದರಿ ಪ್ರಶ್ನೆಪತ್ರಿಕೆಗಳನ್ನು ಮುಂದಿನ ದಿನಗಳಲ್ಲಿ ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸಲು ಕ್ರಮವಹಿಸಲಾಗುವುದು.

11/1/2023

( ಗೋಪಾಲಕೃಷ್ಣ ಹೆಚ್. ಎನ್)
ನಿರ್ದೇಶಕರು, (ಪರೀಕ್ಷೆಗಳು)

ಪ್ರತಿಯನ್ನು :

1. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ ಬೆಂಗಳೂರು ರವರ ಆಪ್ತಶಾಖೆಗೆ ಸಲ್ಲಿಸುತ್ತಾ, ಮಾನ್ಯ ಅಧ್ಯಕ್ಷರು ರವರ ಗಮನಕ್ಕೆ ತರಲು ತಿಳಿಸಿದೆ.
2. ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಬೆಂಗಳೂರು ರವರ ಆಪ್ತಶಾಖೆಗೆ ಮಾಹಿತಿಗಾಗಿ.
3. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರಿಗೆ ಮಾಹಿತಿಗಾಗಿ,
4. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರಿಗೆ ಮಾಹಿತಿಗಾಗಿ,
5. ರಾಜ್ಯದ ಎಲ್ಲಾ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಕ್ರಮಕ್ಕಾಗಿ (ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಮುಖಾಂತರ.)
6. ಕಛೇರಿ ಪ್ರತಿ.